## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1775
ಮಾನ್ಯ ಸದಸ್ಯರ ಹೆಸರು : ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 14-03-2022
ಉತ್ತರಿಸುವ ಸಚಿವರು : ಪ್ರವಾಸೋದ್ಯಮ, ಜೀವಿಶಾಸ್ತ್ರ, ಹಾಗೂ ಪರಿಸರ ಸಚಿವರು

| ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 03 ವರ್ಷಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಕೊಡಗು ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನಾಂಗದವರಿಗೆ ಪ್ರವಾಸಿ ವಾಹನ ಸೌಲಭ್ಯ ನೀಡಲಾಗಿದೆಯೇ; ಈ ಸೌಲಭ್ಯ ಪಡೆಯಲು ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಸದರಿ ಸೌಲಭ್ಯಕ್ಕೆ ಫಲಾನುಭವಿಗಳನ್ನು ಯಾವ ಮಾನದಂಡಗಳಲ್ಲಿ ಆಯ್ಕೆ ಮಾಡಲಾಗುತ್ತದೆ; (ವಿವರ ಒದಗಿಸುವುದು) | 2018-19 ಮತ್ತು 2019-20ನೇ ಸಾಲುಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಎಸ್.ಸಿ.ಎಸ್.ಪಿ. ಮತ್ತು ಟಿ.ಎಸ್.ಪಿ. ಯೋಜನೆ ಅಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ ಸ್ವ-ಉದ್ಯೋಗ ಕಲ್ಪಿಸಿಕೊಳ್ಳಲು ತಲಾ ರೂ.3.00 ಲಕ್ಷಗಳ ಸಹಾಯಧನ ದೊಂದಿಗೆ ಪ್ರವಾಸಿ ಟ್ಯಾಕ್ಸಿ ವಿತರಿಸುವ ಕಾರ್ಯಕ್ರಮವನ್ನು ಇಲಾಖೆಯು ಹಮ್ಮಿಕೊಳ್ಳಲಾಗಿರುತ್ತದೆ.<br><br>2020-21ನೇ ಸಾಲಿನಿಂದ ಸದರಿ ಪ್ರವಾಸಿ ಟ್ಯಾಕ್ಸಿ ಸಹಾಯಧನ ವಿತರಿಸುವ ಕಾರ್ಯಕ್ರಮವನ್ನು ಇಲಾಖೆಯು ಹಮ್ಮಿಕೊಂಡಿರುವುದಿಲ್ಲ.<br><br>ಕೊಡಗು ಜಿಲ್ಲೆಯಲ್ಲಿ ಪ್ರವಾಸಿ ಟ್ಯಾಕ್ಸಿ ಸಹಾಯಧನ ಪಡೆಯಲು 2018-19 ಮತ್ತು 2019-20ನೇ ಸಾಲುಗಳಲ್ಲಿ ಬಂದಿರುವ ಅರ್ಜಿಗಳ ಸಂಖ್ಯೆಯನ್ನು ಈ ಕೆಳಕಂಡ ಕೋಷ್ಟಕದಲ್ಲಿ ಒದಗಿಸಿದೆ.<br><br>(ಕೋಷ್ಟಕ ಕೆಳಗೆ)<br><br>ಸದರಿ ಸೌಲಭ್ಯ ಪಡೆಯಲು ಇರುವ ಮಾರ್ಗಸೂಚಿಗಳನ್ನು **ಅನುಬಂಧ-1** ರಲ್ಲಿ ಒದಗಿಸಿದೆ |
| ಆ) | ಕಳೆದ 03 ವರ್ಷಗಳಲ್ಲಿ ಇಲ್ಲಿನ ಪ್ರವಾಸಿ ಸ್ಥಳಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ನೀಡಿರುವ ಅನುದಾನವೆಷ್ಟು; (ಸಂಪೂರ್ಣ ವಿವರ ನೀಡುವುದು) | **ಅನುಬಂಧ-2** ರಲ್ಲಿ ಒದಗಿಸಿದೆ. |

| ಕ್ರ. ಸಂ | ವರ್ಷ | ಬಂದಿರುವ ಅರ್ಜಿಗಳು | |
|---|---|---|---|
| | | ಪರಿಶಿಷ್ಟ ಜಾತಿ | ಪರಿಶಿಷ್ಟ ಪಂಗಡ |
| 1 | 2018-19 | 25 | 06 |
| 2 | 2019-20 | 12 | 05 |

....2....

